(12)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಜಂ.ಆ/ಯ.ವ/ಆ.ಅ/AS /2016-17.
15

ಜಂಟಿ ಆಯುಕ್ತರವರ ಕಛೇರಿ
ಯಲಹಂಕ ವಲಯ ,ಬೃ.ಬೆಂ.ಮ.ಪಾ.
ಬೆಂಗಳೂರು -92 ದಿನಾಂಕ: 23-11-2016

ಆಡಳಿತಾತ್ಮಕ ಅನುಮೋದನೆ

ವಿಷಯ:- **Improvements and asphalting to roads at Kogilu layout in ward no. 05 Byatarayanapura sub division.**

ಉಲ್ಲೇಖ:1. ಸಾರ್ವಜನಿಕ ಆರೋಗ್ಯ ಸ್ಥಾಯಿ ಸಮಿತಿಯ ಅನುಮೋದನಾ ವಿಷಯ ಸಂಖ್ಯೆ: ಸಾ.ಆ.ಸ್ಥಾ.ಸ/34/2016-17 ದಿನಾಂಕ:08.09.2016.

2. ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ: 005-17-000003

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2015-16ನೇ ಸಾಲಿನ ದರಪಟ್ಟಿಯಂತೆ ಪಿ-3112 ಅನುದಾನದಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ, 200.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ. ಸದರಿ ಕಾಮಗಾರಿಯನ್ನು ಉಲ್ಲೇಖ(1) ರಂತೆ ಸಾರ್ವಜನಿಕ ಆರೋಗ್ಯ ಸ್ಥಾಯಿ ಸಮಿತಿಯಿಂದ ಅನುಮೋದನೆಯಾಗಿದ್ದು, ಆಡಳಿತಾತ್ಮಕ ಅನುಮೋದನೆಯನ್ನು ಈ ಕೆಳಕಂಡಂತೆ ನೀಡಲಾಗಿದೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 10 ಕ್ರ.ಸಂ 15 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

23/11/16

ಜಂಟಿ ಆಯುಕ್ತರು,
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.